# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸದಾಶಿವಯ್ಯ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ದೊಡ್ಡಯಲಕೂರು ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಮತ್ತು ಶ್ರೀ ಮಂಜಪ್ಪ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮಧುಗಿರಿ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಉಪ ಲೋಕಾಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:-** ಸಹಾಯಕ ನಿಬಂಧಕರು (ಕಾನೂನು ಅಭಿಪ್ರಾಯ-2), ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರಸಂಖ್ಯೆ.ಕಂಪ್ಲೆಂಟ್/ಉಪಲೋಕ್/ಬಿಡಿ-777/2008/ ಎಆರ್ಎಲ್ಓ-2, ದಿನಾಂಕ: 20-09-2011.

-----

ಪ್ರಸ್ತಾವನೆ

ಮೇಲೆ ಓದಲಾದ ದಿನಾಂಕ. 20-09-2011ರ ಅರೆ ಸರ್ಕಾರಿ ಪತ್ರದಲ್ಲಿ ಸಹಾಯಕ ನಿಬಂಧಕರು (ಕಾನೂನು ಅಭಿಪ್ರಾಯ-2), ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಶ್ರೀ ಸದಾಶಿವಯ್ಯ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ದೊಡ್ಡಯಲಕೂರು ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಮತ್ತು ಶ್ರೀ ಮಂಜಪ್ಪ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮಧುಗಿರಿ ಇವರುಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರಡಿ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರಡಿ ಕಳುಹಿಸಿರುವ ತಮ್ಮ ವರದಿಯಲ್ಲಿ ಶ್ರೀ ಸದಾಶಿವಯ್ಯ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ದೊಡ್ಡಯಲಕೂರು ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಮತ್ತು ಶ್ರೀ ಮಂಜಪ್ಪ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮಧುಗಿರಿ ಇವರುಗಳು ಆಶ್ರಯ ಮತ್ತು ಅಂಬೇಡ್ಕರ್ ಮತ್ತಿತರ ಯೋಜನೆಗಳಡಿಗಳಲ್ಲಿ ಕರ್ತವ್ಯ ದುರುಪಯೋಗಪಡಿಸಿಕೊಂಡು ಒಬ್ಬ ವ್ಯಕ್ತಿಗೆ ಒಂದೇ ಮನೆಗೆ ಒಂದಕ್ಕಿಂತ ಹೆಚ್ಚಿನ ಬಾರಿ ಹಣ ಬಿಡುಗಡೆ ಮಾಡಿ ಅವ್ಯವಹಾರವೆಸಗಿ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವುದು ತನಿಖೆಯಲ್ಲಿ ನಿಜವೆಂದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಸದರಿ ಆರೋಪಿತರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14 (ಎ) ರಡಿಯಲ್ಲಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತಕ್ಕೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

-----2

ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಪ್ರಕರಣದಲ್ಲಿನ ಆರೋಪಿತರ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಲು ಹಾಗೂ ಅದಕ್ಕಾಗಿ ವಿವರವಾದ ಇಲಾಖಾ ವಿಚಾರಣೆ ಕೈಗೊಳ್ಳಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14 (ಎ) ರಡಿಯಲ್ಲಿ ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತಕ್ಕೆ ವಹಿಸಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ ಗ್ರಾಅಪ 37 ಇಎನ್‌ಕ್ಯೂ 2011, ಬೆಂಗಳೂರು, ದಿನಾಂಕ. 15-11-2011</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಸದಾಶಿವಯ್ಯ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ದೊಡ್ಡಯಲಕೂರು ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು ಮತ್ತು ಶ್ರೀ ಮಂಜಪ್ಪ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮಧುಗಿರಿ ಇವರುಗಳ ವಿರುದ್ಧ ಶಿಸ್ತು ಕ್ರಮ ಪ್ರಾರಂಭಿಸಿ ಇಲಾಖಾ ವಿಚಾರಣೆ ನಡೆಸಲು ಈ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/11/2011
(ಎನ್.ವೈ.ಸಾಗರ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ
ಸಂಕಲನಕಾರರು,ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

ಪ್ರತಿ;
1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
3. ಸಹಾಯಕ ನಿಬಂಧಕರು (ಕಾನೂನು ಅಭಿಪ್ರಾಯ-2), ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು
4. ಕರ್ನಾಟಕ ಉಪ ಲೋಕಾಯುಕ-2, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ತುಮಕೂರು.
8. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
9. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
10. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಧುಗಿರಿ.
11. ಶ್ರೀ ಸದಾಶಿವಯ್ಯ, ಗ್ರಾಮ ಪಂಚಾಯತಿ ಕಾರ್ಯದರ್ಶಿ, ದೊಡ್ಡಯಲಕೂರು ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು
12. ಶ್ರೀ ಮಂಜಪ್ಪ, ಕಿರಿಯ ಇಂಜಿನಿಯರ್, ತಾಲ್ಲೂಕು ಪಂಚಾಯತ್ ಮಧುಗಿರಿ
13. ಗ್ರಾ.ಅ.ರಾಜ್ ಇಲಾಖೆಯ ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ :